16. ಮಿನಿ ಜೂ ಮಿನಕನಗುರ್ಕಿ, ಕೋಲಾರ
17. ಸೊರ್ಕಾಯನಹಳ್ಳಿ, ಚಿಲ್ಡ್ರನ್ಸ್ ಮತ್ತು ಡೀರ್ ಪಾರ್ಕ್, ಕೋಲಾರ
18. ಕೆಂಪೇಗೌಡ ವನಧಾಮ ಸಾವನದುರ್ಗ ಮಾಗಡಿ ತಾಲ್ಲೂಕು, ಬೆಂಗಳೂರು
19. ಕೆಂಪಾಬುದಿ ಡೀರ್ ಪಾರ್ಕ್, ಬೆಂಗಳೂರು
20. ಪಿಲಿಕುಳ ನಿಸರ್ಗಧಾಮ, ಮಂಗಳೂರು
21. ಕೈವಾರ ತಪೋವನ, ಚಿಂತಾಮಣಿ, ಕೋಲಾರ
22. ಡೀರ್ ಪಾರ್ಕ್ - ನ್ಯಾಷನಲ್ ಮಿನರಲ್ ಡೆವಲಪ್‌ಮೆಂಟ್ ಕಾರ್ಪೋರೇಷನ್ ಲಿ., ದೋಣಿಮಲೈ, ಬಳ್ಳಾರಿ

ಸಂಘ ಸಂಸ್ಥೆಗಳಿಂದ ನಡೆಸಲ್ಪಡುತ್ತಿವೆ

ಪ್ರಾಚೀನ ಸ್ಥಳಗಳ ಗುರುತಿಸುವಿಕೆ

91 (724) ಶ್ರೀ ಸಂಪಂಗಿ ಎನ್. (ಬಾಗೇಪಲ್ಲಿ) ಮಾನ್ಯ ಪ್ರವಾಸೋದ್ಯಮ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೋಲಾರ ಜಿಲ್ಲೆಯಲ್ಲಿ ಪ್ರಾಚೀನವಾದ ಸ್ಥಳಗಳನ್ನು ಗುರುತಿಸಲಾಗಿದೆಯೇ; ಗುರುತಿಸಿದ್ದಲ್ಲಿ, ಯಾವ ಯಾವ ಸ್ಥಳಗಳನ್ನು ಗುರುತಿಸಲಾಗಿದೆ? ವಿವರ ನೀಡುವುದು.

ಆ) ಬಾಗೇಪಲ್ಲಿಯಲ್ಲಿ ಗುಮ್ಮನಾಯಕನ ಕೋಟೆಯನ್ನು ರಕ್ಷಣೆ ಮಾಡಲು ಕ್ರಮ ತೆಗೆದುಕೊಳ್ಳಲಾಗಿದೆಯೇ; ಮತ್ತು 1994 ರಿಂದ 1999 ರ ಯೋಜನೆಯಲ್ಲಿ ಇದಕ್ಕಾಗಿ ಹಣವನ್ನು ಬಿಡುಗಡೆ ಮಾಡಿದ ವಿವರ ನೀಡುವುದು.

ಶ್ರೀ ಡಿ.ಬಿ. ಇನಾಂದಾರ್ (ಪ್ರವಾಸೋದ್ಯಮ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು) :

ಅ) ಪ್ರಾಚೀನ ಸ್ಥಳಗಳನ್ನು ಗುರುತಿಸುವ ಕಾರ್ಯ ರಾಜ್ಯ ಹಾಗೂ ಕೇಂದ್ರ ಪುರಾತತ್ವ ಇಲಾಖೆಗೆ ಸಂಬಂಧಿಸಿರುತ್ತದೆ.

ಆ) ಉದ್ಭವಿಸುವುದಿಲ್ಲ.

4ನೇ ರಾಷ್ಟ್ರೀಯ ಕ್ರೀಡಾಕೂಟದ ಸಂದರ್ಭದಲ್ಲಿ ನಡೆದ ಅವ್ಯವಹಾರ

92 (275) ಶ್ರೀ ಸಂಪಂಗಿ ಎನ್. (ಬಾಗೇಪಲ್ಲಿ) ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕರ್ನಾಟಕದಲ್ಲಿ ನಡೆದ 4ನೇ ರಾಷ್ಟ್ರೀಯ ಕ್ರೀಡೆಗಳು ನಡೆದಂತಹ ಸಂದರ್ಭದಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ, ವಿವರ ಕೊಡುವುದು?

ಆ) 4ನೇ ರಾಷ್ಟ್ರೀಯ ಕ್ರೀಡೆಗಳು ನಡೆದಂತಹ ಸಂದರ್ಭದಲ್ಲಿನ ಸಿ.ಎ.ಜಿ. ವರದಿಯನ್ನು ನೀಡುವುದು?

ಶ್ರೀ ಎಸ್.ಎಸ್. ಮಲ್ಲಿಕಾರ್ಜುನ್ (ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು) :

ಅ) ಇಲ್ಲ.

ಆ) ಸಿ.ಎ.ಜಿ. ವರದಿಯನ್ನು ಸದನದಲ್ಲಿ ಮಂಡಿಸಿದೆ.

ಚಿಕ್ಕಬಳ್ಳಾಪುರ ತಾಲ್ಲೂಕನ್ನು ಜಿಲ್ಲೆಯನ್ನಾಗಿ ಪರಿವರ್ತಿಸುವುದು

93 (277) ಶ್ರೀ ಸಂಪಂಗಿ ಎನ್. (ಬಾಗೇಪಲ್ಲಿ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ತಾಲ್ಲೂಕನ್ನು ಜಿಲ್ಲೆಯನ್ನಾಗಿ ಪರಿವರ್ತಿಸಲು ಕೈಗೊಂಡ ಕ್ರಮಗಳಾವುವು; ಕ್ರಮ ತೆಗೆದುಕೊಂಡಲ್ಲಿ, ಯಾವಾಗ ಜಿಲ್ಲೆಯನ್ನಾಗಿ ಮಾಡಲಾಗುವುದು?

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) :

ಅ) ರಾಜ್ಯದಲ್ಲಿನ ಜಿಲ್ಲೆಗಳನ್ನು ಪುನರ್ ರಚನೆ ಮಾಡುವ ಸಂಬಂಧ ಸಾಧಕ ಬಾಧಕಗಳನ್ನು ಪರಿಶೀಲಿಸಲು ಮೂರು ಸಮಿತಿಗಳನ್ನು ನೇಮಿಸಲಾಗಿತ್ತು. ಈ ಮೂರು ಸಮಿತಿಗಳು ವರದಿಯಲ್ಲಿ ಚಿಕ್ಕಬಳ್ಳಾಪುರವನ್ನು ಜಿಲ್ಲೆಯನ್ನಾಗಿ ಪರಿವರ್ತಿಸುವ ಬಗ್ಗೆ ಶಿಫಾರಸ್ಸು ಮಾಡಿರುವುದಿಲ್ಲ. ಆದ್ದರಿಂದ ಚಿಕ್ಕಬಳ್ಳಾಪುರವನ್ನು ಜಿಲ್ಲೆಯನ್ನಾಗಿ ಪರಿವರ್ತಿಸುವ ಯಾವುದೇ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ.

ಮೈಸೂರು ನಗರದ ಹಸಿರೀಕರಣ

94 (224) ಶ್ರೀ ಶಂಕರಲಿಂಗೇಗೌಡ ಹೆಚ್.ಎಸ್. (ಚಾಮರಾಜ) ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮೈಸೂರು ನಗರದ ಹಸಿರೀಕರಣಕ್ಕಾಗಿ ಕಳೆದ ಮೂರು ವರ್ಷಗಳಿಂದೀಚೆಗೆ ಇಲಾಖೆಯ ವತಿಯಿಂದ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿತ್ತು.?

ಆ) ಇದಕ್ಕೆ ವಾರ್ಷಿಕವಾರು ಎಷ್ಟೆಷ್ಟು ವೆಚ್ಚವಾಗಿದೆ?

ಇ) ಮೈಸೂರು ನಗರದ ಹಸಿರೀಕರಣ ಕಾರ್ಯ ತೃಪ್ತಿಕರವಾಗಿ ಸಮರ್ಪಕವಾಗಿ ಆಗದೆ ಇರುವುದರ ಬಗ್ಗೆ ಸರ್ಕಾರದ ನಿಲುವೇನು;

ಈ) ಮುಂದೆ ಸರ್ಕಾರ ಅನುಸರಿಸುವ ಕ್ರಮಗಳಾವುವು?

ಶ್ರೀ ಕೆ.ಹೆಚ್. ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು):

ಅ) ಮೈಸೂರು ನಗರದ ಹಸರೀಕರಣಕ್ಕಾಗಿ ಕಳೆದ ಮೂರು ವರ್ಷಗಳಲ್ಲಿ ಅರಣ್ಯ ಇಲಾಖೆಯು, ಜೆ.ಬಿ.ಐ.ಸಿ. ನೆರವಿನ ಕರ್ನಾಟಕ ಪೂರ್ವಪ್ರಸ್ಥ ಭೂಮಿಯಲ್ಲಿ ಅರಣ್ಯೀಕರಣ ಮತ್ತು ಪರಿಸರ ಯೋಜನೆ, ರಾಜ್ಯವಲಯ ನಗರ ಹಸರೀಕರಣ ಯೋಜನೆ ಹಾಗೂ ಯೋಜನೇತರ ಶೀರ್ಷಿಕೆಯ ಕರ್ನಾಟಕ ಅರಣ್ಯ ಅಭಿವೃದ್ಧಿ ನಿಧಿ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ.

ಆ) ಕಳೆದ ಮೂರು ವರ್ಷಗಳಲ್ಲಿ ಮೈಸೂರು ನಗರದ ಹಸರೀಕರಣಕ್ಕಾಗಿ ವಿವಿಧ ಯೋಜನೆಗಳಲ್ಲಿ ಖರ್ಚು ಭರಿಸಿದ ವಿವರಗಳು ಈ ರೀತಿ ಇರುತ್ತವೆ.

		ವರ್ಷ	
ಯೋಜನೆ	2000-01	2001-02	2002-03
ಜೆಬಿಐಸಿ ಯೋಜನೆ	16.51	32.87	48.84